ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ	:	1648
ಮಾನ್ಯ ಸದಸ್ಯರ ಹೆಸರು	:	ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು)
ವಿಷಯ	:	ಪ್ರವಾಸಿ ತಾಣಗಳ ಸೌಕರ್ಯ ಮತ್ತು ಅವುಗಳ ಅಭಿವೃದ್ಧಿಯ ಕುರಿತು
ಉತ್ತರಿಸುವ ದಿನಾಂಕ	:	20.03.2020
ಉತ್ತರಿಸುವ ಸಚಿವರು	:	ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಎಷ್ಟು ಪ್ರವಾಸಿ ತಾಣಗಳಿವೆ ಮತ್ತು ಅವುಗಳಲ್ಲಿ ನೈಸರ್ಗಿಕವಾಗಿ ರೂಪುಗೊಂಡಂತಹ ಪ್ರವಾಸಿ ತಾಣಗಳ ಸಂಖ್ಯೆ ಎಷ್ಟು;	ರಾಜ್ಯದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ 319 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆ. ಈ ಪೈಕಿ ನೈಸರ್ಗಿಕವಾಗಿ ರೂಪುಗೊಂಡಂತಹ ಪ್ರವಾಸಿ ತಾಣಗಳ ಪ್ರತ್ಯೇಕ ವರ್ಗೀಕರಣ ಮಾಡಿರುವುದಿಲ್ಲ.
ಆ)	ಈ ಎಲ್ಲಾ ಪ್ರವಾಸಿ ತಾಣಗಳು ಪ್ರವಾಸಿಗರಿಗೆ ಅನುಕೂಲತೆಗಳ ದೃಷ್ಟಿಯಿಂದ ಮೂಲಭೂತ ಸೌಕರ್ಯಗಳನ್ನು ಹೊಂದಿವೆಯೇ; ಹಾಗಿದ್ದಲ್ಲಿ ಪ್ರಸ್ತುತ ರಾಜ್ಯವು ಪ್ರವಾಸೋದ್ಯಮ ಕ್ಷೇತ್ರದಲ್ಲಿ ದೇಶದಲ್ಲಿ ಎಷ್ಟನೇ ಸ್ಥಾನದಲ್ಲಿದೆ;	ಹೌದು. 2019ನೇ ಸಾಲಿನಲ್ಲಿ ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯ ಭಾರತ ಸರ್ಕಾರ ಇವರು ಪ್ರಕಟಿಸಿರುವ ಮಾಹಿತಿಯಂತೆ ರಾಜ್ಯವು ದೇಶೀಯ ಪ್ರವಾಸಿಗರ ಭೇಟಿಯ ಅಂಕಿ-ಅಂಶಗಳಿಗನುಗುಣವಾಗಿ ಮೂರನೇ ಸ್ಥಾನದಲ್ಲಿದೆ.
ಇ)	ಪ್ರವಾಸಿ ಚಟುವಟಿಕೆಗಳಿಂದ ಪರೋಕ್ಷವಾಗಿ ಈ ಕ್ಷೇತ್ರದಲ್ಲಿ ಇಂದಿನ ಉದ್ಯೋಗ ಸೃಷ್ಟಿಯ ಶೇಕಡ ಪ್ರಮಾಣ ಎಷ್ಟು;	ಪ್ರವಾಸೋದ್ಯಮ ಕ್ಷೇತ್ರವು ದೇಶದ ಉದ್ಯೋಗ ಸೃಷ್ಟಿಯಲ್ಲಿ ಪರೋಕ್ಷವಾಗಿ ಪ್ರಮುಖ ಪಾತ್ರ ವಹಿಸುತ್ತಿರುತ್ತದೆ. ಆದರೆ, ಪ್ರಸ್ತುತ ಪ್ರವಾಸೋದ್ಯಮ ಕ್ಷೇತ್ರವು ನೇರವಾಗಿ ಸೃಷ್ಟಿಸಬಹುದಾದ/ ಸೃಷ್ಟಿಸುವ ಉದ್ಯೋಗಾವಕಾಶಗಳನ್ನು ಅಂದಾಜು ಮಾಡುವ ವ್ಯವಸ್ಥೆ ಇರುವುದಿಲ್ಲ.
ಈ)	ರಾಜ್ಯದ ಜಿಡಿಪಿಗೆ ಪ್ರವಾಸೋದ್ಯಮ ಇಲಾಖೆಯು ನೀಡುತ್ತಿರುವ ಕೊಡುಗೆ ಎಷ್ಟು; ಇದನ್ನು ಉತ್ತಮಗೊಳಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳಾವುವು;	ಪ್ರವಾಸೋದ್ಯಮ ಮಂತ್ರಾಲಯ, ಭಾರತ ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುವ ಇಂಡಿಯನ್ ಬ್ರ್ಯಾಂಡ್ ಈಕ್ವಿಟಿ ಫೌಂಡೇಶನ್ ಸಂಸ್ಥೆಯು ಅಂದಾಜಿಸಿರುವಂತೆ ರಾಜ್ಯದ ಜಿಡಿಪಿಯಲ್ಲಿ ಪ್ರವಾಸೋದ್ಯಮ ಕ್ಷೇತ್ರದ ಪಾಲು ಶೇ.14.8ರಷ್ಟು ಆಗಿರುತ್ತದೆ. ರಾಜ್ಯದಲ್ಲಿ ಪ್ರವಾಸೋದ್ಯಮ ನೀತಿ 2020-25ನ್ನು ಮುಂದಿನ ಆರ್ಥಿಕ ವರ್ಷದಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ರಾಜ್ಯದ ಜಿಡಿಪಿಯಲ್ಲಿ ಪ್ರವಾಸೋದ್ಯಮ ಕ್ಷೇತ್ರದ ಪಾಲನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಅಗತ್ಯ ಕಾರ್ಯಕ್ರಮಗಳನ್ನು ರೂಪಿಸಿದೆ.
ಉ)	ಪ್ರವಾಸಿಗರ ಸಂಖ್ಯೆ ಅಧಿಕವಾಗಲು ಮತ್ತು ಇದನ್ನು ಒಂದು ಉದ್ಯಮವನ್ನಾಗಿ ಬೆಳೆಸಲು ಇಲಾಖೆಯ ಮುಂದಿರುವ ಸವಾಲುಗಳೇನು; ಇದಕ್ಕೆ ಪ್ರವಾಸೋದ್ಯಮ ನೀತಿಯಲ್ಲಿ ಕಂಡು ಕೊಳ್ಳಲಾದ ಮಾರ್ಗೋಪಾಯಗಳಾವುವು?	ರಾಜ್ಯದಲ್ಲಿ ಪ್ರವಾಸಿಗರ ಸಂಖ್ಯೆ ಅಧಿಕವಾಗಲು ಮತ್ತು ಇದನ್ನು ಒಂದು ಉದ್ಯಮವನ್ನಾಗಿ ಬೆಳೆಸಲು ಅಗತ್ಯವಾದ ಮಾನವ ಹಾಗೂ ಆರ್ಥಿಕ ಸಂಪನ್ಮೂಲಗಳ ಕೊರತೆ ಇರುತ್ತದೆ. ಈ ಕೊರತೆಗಳನ್ನು ನಿವಾರಿಸಿಕೊಳ್ಳಲು 2020-25ನೇ ನೂತನ ಪ್ರವಾಸೋದ್ಯಮ ನೀತಿಯಲ್ಲಿ ರಾಜ್ಯದ ಪ್ರವಾಸಿ ತಾಣಗಳಲ್ಲಿ ಪ್ರವಾಸಿ ಸೌಕರ್ಯಗಳ ಅಭಿವೃದ್ಧಿ, ಉತ್ತೇಜನ, ಹಾಗೂ ಪ್ರಚಾರ ಕಾರ್ಯಕ್ರಮಗಳನ್ನು ಕೈಗೊಳ್ಳಲು ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಹೂಡಿಕೆದಾರರನ್ನು ಆಕರ್ಷಿಸಿ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಹೂಡಿಕೆ ಮಾಡಲು ಉತ್ತೇಜಿಸುವ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ.

ಕಡತ ಸಂಖ್ಯೆ: ಟಿಓಆರ್ 119 ಟಿಡಿವಿ 2020

(ಸಿ.ಟಿ.ರವಿ)
ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ
ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.